2008

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶಿವಮೊಗ್ಗ ಜಿಲ್ಲೆ ಸಾಗರ ಪಟ್ಟಣದ ಮಹಾ ಯೋಜನೆಗೆ ಸರ್ಕಾರದ ಅಂತಿಮ ಅನುಮೋದನೆ ನೀಡುವ ಕುರಿತು.

ಓದಲಾಗಿದೆ:- 1) ಸರ್ಕಾರದ ಆದೇಶ ಸಂಖ್ಯೆ:ನಅಇ 113 ಬೆಂರೂಪ್ರಾ 2004 ಬೆಂಗಳೂರು ದಿನಾಂಕ:04.07.2005.

2) ಸಾಗರ ಪುರಸಭೆ:ಯೋಜನಾ ಪ್ರಾಧಿಕಾರ ಪತ್ರ ಸಂ: ನಗರಸಭೆ:ಸಾಗರ:ಯೋಪ್ರಾ:ಮ.ಯೋ::2007-08 ದಿನಾಂಕ:31.03.2008.

3) ದಿನಾಂಕ 02.06.2008 ರಂದು ಕಡತ ಸಂಖ್ಯೆ: ನಯೋ(14):ಉನಿ(ಕಂ.ಕಾ):ಸಾಗರ.ಮ.ಯೋ.ಅ:08-09 ರಲ್ಲಿ ನಗರ ಯೋಜನಾ ನಿರ್ದೇಶಕರು ನೀಡಿರುವ ಅಭಿಪ್ರಾಯ.

*****

**ಪ್ರಸ್ತಾವನೆ:**

ಮೇಲೆ (1)ರ ಆದೇಶದಲ್ಲಿ ಶಿವಮೊಗ್ಗ ಜಿಲ್ಲೆ ಸಾಗರ ಪಟ್ಟಣದ ಮಹಾ ಯೋಜನೆಗೆ ಸರ್ಕಾರದ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ಸಾಗರ ಯೋಜನಾ ಪ್ರಾಧಿಕಾರವು ಶಿವಮೊಗ್ಗ ಜಿಲ್ಲೆ ಸಾಗರ ಪಟ್ಟಣದ ಮಹಾ ಯೋಜನೆಯನ್ನು ತಯಾರಿಸಿ ಅಂತಿಮ ಅನುಮೋದನೆಯನ್ನು ಕೋರಿರುತ್ತಾರೆ.

ಮೇಲೆ ಓದಲಾದ (3)ರ ನಗರ ಯೋಜನಾ ನಿರ್ದೇಶಕರ ಕಛೇರಿಯ ಕಡತದಲ್ಲಿ ಸಾಗರ ಪಟ್ಟಣದ ಜನಸಂಖ್ಯೆಯು 2021 ನೇ ಇಸವಿಗೆ 85,000 ಗಳಷ್ಟು ಬೆಳವಣಿಗೆ ಆಗಬಹುದೆಂದು ಅಂದಾಜಿಸಿ ಮಹಾ ಯೋಜನೆಯನ್ನು ತಯಾರಿಸಲಾಗಿದೆ. ಸಾಗರ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ವಿಸ್ತೀರ್ಣವು 17.40 ಚ.ಕಿ.ಮೀ.ಹಾಗೂ ಪ್ರಸ್ತಾಪಿತ ನಗರೀಕರಣದ ವಿಸ್ತೀರ್ಣವು 13.18 ಚ.ಕಿ.ಮೀ ಇಲ್ಲವೆಂದು ಪ್ರಸ್ತಾಪಿಸಿ ಯೋಜನೆಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ (12) ರಲ್ಲಿನ ಅಂಶಗಳನ್ನು ಪರಿಗಣಿಸಿ, ನಗರದ ಮುಂದಿನ ಯೋಜಿತ ಬೆಳವಣಿಗೆಗಳಿಗಾಗಿ ಮಹಾಯೋಜನೆಯನ್ನು ಅನುಷ್ಠಾನಗೊಳಿಸಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 13(3)ರ ಪ್ರಕಾರ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿದ ನಂತರ ಈ ಕೆಳಕಂಡಂತೆ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 80 ಬೆಂರೂಪ್ರಾ 2008**
**ಬೆಂಗಳೂರು ದಿನಾಂಕ:21.07.2008**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಶಿವಮೊಗ್ಗ ಜಿಲ್ಲೆ ಸಾಗರ ಪಟ್ಟಣದ ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 13(3)ರನ್ವಯ ಈ ಕೆಳಕಂಡ ನಿಬಂಧನೆಗೊಳಪಟ್ಟು ಅಂತಿಮ ಅನುಮೋದನೆ ನೀಡಲಾಗಿದೆ.

"ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯ ಕಲಂ.69(1)ರನ್ವಯ ನಿಗದಿತ ಅವಧಿಯೊಳಗೆ ಕ್ರಮ ಕೈಗೊಳ್ಳತಕ್ಕದ್ದು"

ಮಹಾಯೋಜನೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿ.ಟಿ.ನಾರಾಯಣಸ್ವಾಮಿ)
ಸರ್ಕಾರದ ಅಧೀನ ಕಾರ್ಯದರ್ಶಿ,
(ಪ್ರ) ನಗರಾಭಿವೃದ್ಧಿ ಇಲಾಖೆ.

ಗೆ:
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ರವರಿಗೆ ಪ್ರಕಟಣೆಗಾಗಿ ಹಾಗೂ ಪ್ರಕಟಿಸಿದ 200 ಪ್ರತಿಗಳನ್ನು ನಗರಾಭಿವೃದ್ಧಿ ಇಲಾಖೆಗೆ ಕಳುಹಿಸಲು ಕೋರಿದೆ.

ಇವರಿಗೆ:
1)ನಿರ್ದೇಶಕರು, ನಗರ ಯೋಜನಾ ಇಲಾಖೆ, ಬೆಂಗಳೂರು.
2)[illegible]